**All India Radio: Bangalore**
**National Bulletin In Kannada**
**27.02.2026  7.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ಪ್ರಸಕ್ತ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ ಶೇಕಡಾ ೭.೮ ರಷ್ಟು ಬೆಳವಣಿಗೆ ದಾಖಲಿಸಿದ ದೇಶದ ಆರ್ಥಿಕತೆ**

**೨. ಪ್ರಧಾನಿ ನರೇಂದ್ರ ಮೋದಿ ನಾಳೆ ರಾಜಸ್ಥಾನಕ್ಕೆ ಭೇಟಿ; ೧೬ ಸಾವಿರದ ೬೮೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ**

**೩. ’ದಿ ಕೇರಳ ಸ್ಟೋರಿ-೨-ಗೋಸ್ ಬಿಯಾಂಡ್’ ಚಲನಚಿತ್ರ ಬಿಡುಗಡೆಯ ಮೇಲಿನ ಮಧ್ಯಂತರ ತಡೆಯಾಜ್ಞೆ ತೆರವುಗೊಳಿಸಿದ ಕೇರಳ ಹೈಕೋರ್ಟ್**

**೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂಗ್ಲೆಂಡ್ ವಿರುದ್ಧ ಟಾಸ್ ಗೆದ್ದ ನ್ಯೂಜಿಲೆಂಡ್ ಬ್ಯಾಟಿಂಗ್ ಆಯ್ಕೆ**

**<>><><*><><<>**

ಪ್ರಸಕ್ತ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ ಭಾರತದ ಆರ್ಥಿಕತೆಯು ಶೇಕಡಾ ೭.೮ ರಷ್ಟು ಬೆಳವಣಿಗೆ ಕಂಡಿದೆ. ೨೦೨೪-೨೫ರಲ್ಲಿ ಶೇಕಡಾ ೭.೧ ಕ್ಕೆ ಹೋಲಿಸಿದರೆ, ಪ್ರಸ್ತುತ ಹಣಕಾಸು ವರ್ಷದಲ್ಲಿ ನೈಜ ಜಿಡಿಪಿಯಲ್ಲಿನ ಬೆಳವಣಿಗೆಯ ದರ ಶೇಕಡಾ ೭.೬ ಎಂದು ಅಂದಾಜಿಸಲಾಗಿದೆ.  ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ಇಂದು ವಾರ್ಷಿಕ ಮತ್ತು ತ್ರೈಮಾಸಿಕ ಅಂದಾಜುಗಳ ಹೊಸ ಸರಣಿಯನ್ನು ೨೦೨೨-೨೩ ಮೂಲ ವರ್ಷದೊಂದಿಗೆ ಬಿಡುಗಡೆ ಮಾಡಿದೆ.  ಪ್ರಸಕ್ತ ಹಣಕಾಸು ವರ್ಷದಲ್ಲಿ ಒಟ್ಟಾರೆ ಆರ್ಥಿಕ ಕಾರ್ಯಕ್ಷಮತೆಯು ಪ್ರಾಥಮಿಕವಾಗಿ ಎರಡನೇ ತ್ರೈಮಾಸಿಕದಲ್ಲಿ ಶೇಕಡಾ ೮.೪ ಮತ್ತು ಮೂರನೇ ತ್ರೈಮಾಸಿಕದಲ್ಲಿ ಶೇಕಡಾ ೭.೮ ರಷ್ಟು ಬಲವಾದ ನೈಜ ಬೆಳವಣಿಗೆಯ ಕಾರಣದಿಂದಾಗಿದೆ ಎಂದು ಸಚಿವಾಲಯ ತಿಳಿಸಿದೆ.

**<>><><*><><<>**

ಜಾಗತಿಕ ಅನಿಶ್ಚಿತತೆಗಳ ಹೊರತಾಗಿಯೂ ದೇಶದ ಕಾರ್ಯಕ್ಷಮತೆ ಸ್ಥಿರವಾಗಿದೆ ಎಂದು ಮುಖ್ಯ ಆರ್ಥಿಕ ಸಲಹೆಗಾರ ಡಾ.ವಿ.ಅನಂತ ನಾಗೇಶ್ವರನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಲ್ಲಿ ದೇಶದ ನೈಜ ಜಿಡಿಪಿ ಬೆಳವಣಿಗೆ ಶೇಕಡಾ ೭ ಕ್ಕಿಂತ ಹೆಚ್ಚಿದ್ದು, ಇದು ಆರ್ಥಿಕತೆಯ ಸ್ಥೂಲ ಸ್ಥಿತಿಸ್ಥಾಪಕತ್ವವನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದರು. ಪ್ರಸ್ತುತ ಸೂಚಕಗಳ ಆಧಾರದ ಮೇಲೆ ನಾಮಾಂಕಿತ ಜಿಡಿಪಿ ಬೆಳವಣಿಗೆ ಶೇಕಡಾ ೧೧ರ ಸಮೀಪದಲ್ಲಿದೆ. ಇದು ನಾಲ್ಕು ಟ್ರಿಲಿಯನ್ ಅಮೆರಿಕನ್ ಡಾಲರ್ ಗಡಿಯನ್ನು ಸುಲಭವಾಗಿ ದಾಟಲಿದೆ ಎಂದು ಅವರು ಮಾಹಿತಿ ನೀಡಿದರು.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ರಾಜಸ್ಥಾನದ ಅಜ್ಮೀರ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು, ೧೬ ಸಾವಿರದ ೬೮೦ ಕೋಟಿ ರೂಪಾಯಿಗೂ ಹೆಚ್ಚಿನ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು ನಗರಾಭಿವೃದ್ಧಿ, ಕುಡಿಯುವ ನೀರು ಸರಬರಾಜು, ರಸ್ತೆಗಳು, ನೀರಾವರಿ, ಇಂಧನ, ಕೈಗಾರಿಕಾ ಮೂಲಸೌಕರ್ಯ ಸೇರಿದಂತೆ ಪ್ರಮುಖ ಕ್ಷೇತ್ರಗಳನ್ನು ಒಳಗೊಂಡಿವೆ. ಇದೇ ವೇಳೆ, ೧೪ ವರ್ಷ ವಯಸ್ಸಿನ ಬಾಲಕಿಯರಿಗೆ ಹ್ಯೂಮನ್ ಪ್ಯಾಪಿಲೋಮ ವೈರಸ್-ಎಚ್‌ಪಿವಿ ಲಸಿಕೆ ಹಾಕುವ ರಾಷ್ಟ್ರವ್ಯಾಪಿ ಅಭಿಯಾನಕ್ಕೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಈ ಉಪಕ್ರಮವು, ಮಹಿಳೆಯರಲ್ಲಿ ಗರ್ಭಕಂಠ ಕ್ಯಾನ್ಸರ್ ತಡೆಗಟ್ಟುವ ಗುರಿ ಹೊಂದಿದೆ.  ಉದ್ಯೋಗ ಸೃಷ್ಟಿ ಮತ್ತು ಯುವ ಸಬಲೀಕರಣಕ್ಕೆ ಸರ್ಕಾರದ ಬದ್ಧತೆಯನ್ನು ಮತ್ತಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ರಾಜಸ್ಥಾನದ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವಕರಿಗೆ ೨೧ ಸಾವಿರದ ೮೦೦ ಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ಪ್ರಧಾನಿ ನರೇಂದ್ರ ಮೋದಿ ವಿತರಿಸಲಿದ್ದಾರೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದು ರಾಜಸ್ತಾನದ ಜೈಸಲ್ಮೇರ್‌ನಲ್ಲಿರುವ ವಾಯುನೆಲೆಯಲ್ಲಿ ಸ್ವದೇಶಿ ನಿರ್ಮಿತ ಲಘು ಯುದ್ಧ ಹೆಲಿಕಾಪ್ಟರ್ 'ಪ್ರಚಂಡ್'ನಲ್ಲಿ ಹಾರಾಟ ನಡೆಸಿದರು. ಹಾರಾಟಕ್ಕೂ ಮುನ್ನ ವಾಯುಪಡೆಯ ಹಿರಿಯ ಅಧಿಕಾರಿಗಳು, ರಾಷ್ಟ್ರಪತಿಗಳಿಗೆ ಹೆಲಿಕಾಪ್ಟರ್‌ನ ಕಾರ್ಯಾಚರಣೆಯ ಸಾಮರ್ಥ್ಯ ಮತ್ತು ತಾಂತ್ರಿಕ ವೈಶಿಷ್ಟ್ಯಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರು. ಪ್ರಚಂಡ್, ಭಾರತದ ಮೊದಲ ಸ್ವದೇಶಿ ವಿನ್ಯಾಸದ ಯುದ್ಧ ಹೆಲಿಕಾಪ್ಟರ್ ಆಗಿದ್ದು, ಇದನ್ನು ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್-ಎಚ್‌ಎಎಲ್ ಅಭಿವೃದ್ಧಿಪಡಿಸಿದೆ. ಸಮುದ್ರ ಮಟ್ಟದಿಂದ ಅತಿ ಎತ್ತರದ ಪ್ರದೇಶಗಳಲ್ಲಿ ಕಾರ್ಯಾಚರಣೆ ನಡೆಸಲು ವಿಶೇಷವಾಗಿ ವಿನ್ಯಾಸಗೊಳಿಸಲಾದ ಈ ಹೆಲಿಕಾಪ್ಟರ್, ವಾಯುಪಡೆಯ ಬಲವನ್ನು ಗಮನಾರ್ಹವಾಗಿ ಹೆಚ್ಚಿಸಿದೆ.

**<>><><*><><<>**

ದೆಹಲಿ ಅಬಕಾರಿ ನೀತಿಗೆ ಸಂಬಂಧಿಸಿದ ಭ್ರಷ್ಟಾಚಾರ ಪ್ರಕರಣದಲ್ಲಿ ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಮತ್ತು ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರನ್ನು ದೆಹಲಿಯ ನ್ಯಾಯಾಲಯ ಇಂದು ದೋಷಮುಕ್ತಗೊಳಿಸಿದೆ. ಕೇಂದ್ರ ತನಿಖಾ ದಳ-ಸಿಬಿಐ ಸಲ್ಲಿಸಿದ್ದ ದೋಷಾರೋಪ ಪಟ್ಟಿಯನ್ನು ಪರಿಗಣಿಸಲು ನ್ಯಾಯಾಲಯ ನಿರಾಕರಿಸಿತು. ಸಿಬಿಐ ಸಲ್ಲಿಸಿದ ದೋಷಾರೋಪ ಪಟ್ಟಿಯಲ್ಲಿ ಹಲವು ಲೋಪ-ದೋಷಗಳಿದ್ದು, ಅದರಲ್ಲಿರುವ ಆರೋಪಗಳಿಗೆ ಬಲವಾದ ಪುರಾವೆಗಳಿಲ್ಲ ಎಂದು ವಿಶೇಷ ನ್ಯಾಯಾಧೀಶ ಜಿತೇಂದ್ರ ಸಿಂಗ್ ಅಭಿಪ್ರಾಯಪಟ್ಟಿದ್ದಾರೆ. ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಇತರೆ ೨೧ ಜನರನ್ನೂ ಕೂಡ ನ್ಯಾಯಾಲಯ ಖುಲಾಸೆಗೊಳಿಸಿದೆ. ಆಮ್ ಆದ್ಮಿ ಪಕ್ಷ ಸರ್ಕಾರ, ಅಬಕಾರಿ ನೀತಿ ಹಾಗೂ ಅನುಷ್ಠಾನದಲ್ಲಿ ಭ್ರಷ್ಟಾಚಾರ ನಡೆಸಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸಿಬಿಐ ತನಿಖೆ ನಡೆಸುತ್ತಿತ್ತು.

**<>><><*><><<>**

ಕೃತಕಬುದ್ಧಿಮತ್ತೆ ಅಳವಡಿಕೆಯಲ್ಲಿ ನಂಬಿಕೆಯ ಅಂಶವು ಬಹಳ ಮುಖ್ಯ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ 'ರೈಸಿಂಗ್ ಭಾರತ್' ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಸಚಿವರು, ಎಐ ಪರಿವರ್ತನೆಯನ್ನು ಗಂಭೀರವಾಗಿ ಪರಿಗಣಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ಯುವ ಪ್ರತಿಭೆಗಳಿಗೆ ಕೌಶಲ್ಯ ಒದಗಿಸುವತ್ತ ಕೇಂದ್ರ ಸರ್ಕಾರ ಹೆಚ್ಚಿನ ಗಮನಹರಿಸುತ್ತಿದೆ. ಅಲ್ಲದೆ, ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರಗಳು ಕೂಡ ಹೆಚ್ಚಿನ ಪ್ರಯತ್ನ ಮಾಡಬೇಕಾಗುತ್ತದೆ. ಇದಕ್ಕಾಗಿ ಸಮಾರು ನಾಲ್ಕು ವರ್ಷಗಳ ಹಿಂದೆ ಮಾಹಿತಿ ತಂತ್ರಜ್ಞಾನ ಉದ್ಯಮದ ಸಹಭಾಗಿತ್ವದಲ್ಲಿ ಭವಿಷ್ಯದ ಕೌಶಲ್ಯ ಕಾರ್ಯಕ್ರಮವನ್ನು ಪ್ರಾರಂಭಿಸಿತ್ತು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

**<>><><*><><<>**

ಕೇರಳ ಹೈಕೋರ್ಟ್‌ನ ವಿಭಾಗೀಯ ಪೀಠ ಇಂದು 'ದಿ ಕೇರಳ ಸ್ಟೋರಿ-೨- ಗೋಸ್ ಬಿಯಾಂಡ್' ಚಲನಚಿತ್ರ ಬಿಡುಗಡೆಯ ಮೇಲಿನ ಮಧ್ಯಂತರ ತಡೆಯಾಜ್ಞೆಯನ್ನು ತೆರವುಗೊಳಿಸಿದೆ. ಇದರಿಂದ ಚಿತ್ರ ಪ್ರದರ್ಶನಕ್ಕೆ ದಾರಿ ಸುಗಮವಾಗಿದೆ. ನ್ಯಾಯಮೂರ್ತಿಗಳಾದ ಸುಶ್ರುತ್ ಅರವಿಂದ್ ಧರ್ಮಾಧಿಕಾರಿ ಮತ್ತು ಪಿ.ವಿ.ಬಾಲಕೃಷ್ಣನ್ ಅವರನ್ನೊಳಗೊಂಡ ವಿಭಾಗೀಯ ಪೀಠ, ಚಿತ್ರದ ಬಿಡುಗಡೆಯನ್ನು ೧೫ ದಿನಗಳವರೆಗೆ ತಡೆ ಹಿಡಿದಿದ್ದ ಏಕಸದಸ್ಯ ಪೀಠದ ಹಿಂದಿನ ಆದೇಶವನ್ನು ರದ್ದುಗೊಳಿಸಿದೆ. ಚಲನಚಿತ್ರ ಇಂದು ಬಿಡುಗಡೆಯಾಗಬೇಕಿತ್ತು.

**<>><><*><><<>**

ಭಾರತ-ಅಮೆರಿಕ ಮಧ್ಯಂತರ ವ್ಯಾಪಾರ ಒಪ್ಪಂದದಲ್ಲಿ ದೇಶದ ಕೃಷಿ ಮತ್ತು ಎಮ್‌ಎಸ್‌ಎಮ್‌ಇ ವಲಯದ ಹಿತಾಸಕ್ತಿಗಳನ್ನು ಅತ್ಯಂತ ಪ್ರಮುಖವಾಗಿ ಇರಿಸಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ರೈತರು, ಹೈನುಗಾರಿಕೆ, ಕೋಳಿ ಸಾಕಣೆ, ಮೀನುಗಾರರು, ಎಮ್‌ಎಸ್‌ಎಮ್‌ಇ, ಕೈಮಗ್ಗ ಸೇರಿದಂತೆ ಎಲ್ಲಾ ಕಾರ್ಮಿಕ ವಲಯಗಳಿಗೆ ಸಂಬಂಧಿಸಿದ ಸೂಕ್ಷ್ಮ ವಿಷಯಗಳನ್ನು ಪರಿಗಣಿಸಲಾಗಿದೆ. ಈ ಒಪ್ಪಂದವು, ದೇಶದ ಸೂಕ್ಷ್ಮ ವಲಯಗಳ ಹಿತಾಸಕ್ತಿಗಳನ್ನು ಕಾಪಾಡಲಿದೆ ಎಂದು ತಿಳಿಸಿದರು.

<><><*><><<>

ಪಾಕಿಸ್ತಾನದಲ್ಲಿನ ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿಕೊಂಡು ಅಫ್ಘಾನಿಸ್ತಾನ ಇಂದು ವಾಯು ದಾಳಿ ನಡೆಸಿದೆ. ಈ ಮೂಲಕ ಎರಡು ನೆರೆ ರಾಷ್ಟ್ರಗಳ ನಡುವಿನ ಉದ್ವಿಗ್ನತೆ ಹೆಚ್ಚಿದೆ.  ಈ ಕುರಿತು ಮಾಹಿತಿ ನೀಡಿದ ತಾಲಿಬಾನ್ ಉಪ ವಕ್ತಾರ ಹಮ್ದುಲ್ಲಾ ಫಿತ್ರತ್, ಅಫ್ಘಾನ್ ವಾಯುಪಡೆಯು ಇಂದು ಬೆಳಗ್ಗೆ ಇಸ್ಲಮಾಬಾದ್, ನೌಶೇರಾ, ಜಮ್ರುದ್ ಮತ್ತು ಆಬೋಟಾಬಾದ್‌ನಲ್ಲಿರುವ ನೆಲೆಗಳ ಮೇಲೆ ದಾಳಿ ನಡೆಸಿ, ಮಿಲಿಟರಿ ಮೂಲಸೌಲಭ್ಯಗಳನ್ನು ನಾಶಪಡಿಸಿದೆ ಎಂದು ತಿಳಿಸಿದರು. ಕಾಬೂಲ್, ಕಂದಹಾರ್, ಪಕ್ತಿಯಾಗಳ ಮೇಲೆ ಪಾಕಿಸ್ತಾನ ವಾಯುಪಡೆ ನಡೆಸಿದ ವಾಯು ದಾಳಿಗೆ ಪ್ರತಿಕಾರವಾಗಿ ಈ ದಾಳಿ ನಡೆಸಲಾಗಿದೆ.  ದಾಳಿಯಲ್ಲಿ ೫೫ ಪಾಕಿಸ್ತಾನಿ ಸೈನಿಕರು ಮೃತಪಟ್ಟಿದ್ದು, ೨ ಮಿಲಿಟರಿ ನೆಲೆಗಳು ಮತ್ತು ೧೯ ಶಿಬಿರಗಳು ನಾಶವಾಗಿವೆ ಎಂದು ಮಾಹಿತಿ ನೀಡಿದರು.

<><><*><><<>

ಕೊಲಂಬೋದ ಆರ್. ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ರ ಹಂತದ ಗುಂಪು-೨ರ ಪಂದ್ಯದಲ್ಲಿಂದು ಇಂಗ್ಲೆಂಡ್ ಮತ್ತು ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿವೆ.  ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡುತ್ತಿರುವ ನ್ಯೂಜಿಲೆಂಡ್, ಇತ್ತೀಚಿನ ವರದಿಯಂತೆ ೮.೪ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೭೩ ರನ್ ಮಾಡಿ ಆಡುತ್ತಿದೆ.

<><><*><><<>

ಕರ್ನಾಟಕದ ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಫೈನಲ್ ಪಂದ್ಯದಲ್ಲಿ ಕರ್ನಾಟಕ ವಿರುದ್ಧ ಜಮ್ಮು-ಕಾಶ್ಮೀರ ಎರಡನೇ ಇನ್ನಿಂಗ್ಸ್‌ನಲ್ಲಿ ನಾಲ್ಕನೇ ದಿನದಾಟದಲ್ಲಿಂದು ೪ ವಿಕೆಟ್ ನಷ್ಟಕ್ಕೆ ೧೮೬ ರನ್ ಗಳಿಸಿದೆ. ನಾಳೆ ಐದನೇ ದಿನದಾಟ ಮುಂದುವರಿಯಲಿದೆ. ಪ್ರಸ್ತುತ ಜಮ್ಮು-ಕಾಶ್ಮೀರ ೪೭೭ ರನ್‌ಗಳ ಮುನ್ನಡೆಯಲಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಜಮ್ಮು-ಕಾಶ್ಮೀರ ೫೮೪ ರನ್ ಗಳಿಸಿದ್ದು, ಕರ್ನಾಟಕ ೨೯೩ ರನ್ ಗಳಿಸಿದೆ.

<><><*><><<>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೯೬೧ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೧ ಸಾವಿರದ ೨೮೭ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೩೧೮ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೧೭೯ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೯೦ ರೂಪಾಯಿ ೯೭ ಪೈಸೆಯಷ್ಟಾಗಿದೆ.

**<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**